ದೂರವಾಣಿ ಸಂಖ್ಯೆ : 080-22212343
ಫ್ಯಾಕ್ಸ್ ಸಂಖ್ಯೆ : 080-22278803
Website : https://kptcl.karnataka.gov.in

ಇ-ಮೇಲ್ ವಿಳಾಸ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್.) : ಯು40109ಕೆಎ1999ಎಸ್‌ಜಿಸಿ025521
ಕಂಪನಿಯ ಅಧಿಕೃತ ಕಛೇರಿ : ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ. ರಸ್ತೆ, ಬೆಂಗಳೂರು-560 009

ಸಂಖ್ಯೆ: ಕವಿಪ್ರನಿನಿ/ಬಿ16/820/2019-20 ದಿನಾಂಕ : 3 JUN 2021

## ಸುತ್ತೋಲೆ

ವಿಷಯ: ಪ್ರೊಬೇಷನರಿ ಅವಧಿಯಲ್ಲಿ ನಿಗದಿಪಡಿಸಿರುವ ಇಲಾಖಾ ಪರೀಕ್ಷೆಗಳನ್ನು ಉತ್ತೀರ್ಣರಾಗದೇ ಇರುವಂತಹ ನೌಕರರ ಸೇವೆಯನ್ನು ವಜಾಗೊಳಿಸುವ ಬಗ್ಗೆ.

ಉಲ್ಲೇಖ: 1. ಮಂಡಳಿ ಪತ್ರ ಸಂಖ್ಯೆ: ಕವಿಮಂ/ಬಿ16/ಬಿ15/7982/83-84 ದಿನಾಂಕ: 26.02.1994.

2. ನಿಗಮ ಅಧಿಸೂಚನೆ ಸಂಖ್ಯೆ: ಕವಿಪ್ರನಿನಿ/ಬಿ16/5816/82-83 ದಿನಾಂಕ: 07.03.2003.

*****

ಕವಿಮಂ ನೌಕರಿ ಭರ್ತಿ ಮತ್ತು ಬಡತಿ ನಿಯಮಗಳನುಸಾರ, ನೇರ ನೇಮಕಾತಿಯಡಿಯಲ್ಲಿ ವಿವಿಧ ಹುದ್ದೆಗಳಿಗೆ ಆಯ್ಕೆಯಾಗಿ ನೇಮಕಗೊಳ್ಳುವ ಅಭ್ಯರ್ಥಿಗಳನ್ನು ಒಂದು ವರ್ಷದವರೆಗೆ ಪರೀಕ್ಷಾರ್ಥ ಅವಧಿಯ (Probationary Period) ಮೇಲೆ ನೇಮಿಸಿಕೊಳ್ಳಬೇಕಾಗಿರುತ್ತದೆ. ಈ ರೀತಿ ನೇಮಕಾತಿ ಹೊಂದುವ ನೌಕರರು, ಈ ಒಂದು ವರ್ಷದ ಅವಧಿಯಲ್ಲಿ, ತಮ್ಮ ಪರೀಕ್ಷಾರ್ಥ ಅವಧಿಯನ್ನು ತೃಪ್ತಿಕರವಾಗಿ ಪೂರ್ಣಗೊಳಿಸಲು ಉದ್ಯೋಗ ಪೂರ್ವ ತರಬೇತಿ ಅಂತ್ಯದಲ್ಲಿ ನಡೆಸಲಾಗುವ ಪರೀಕ್ಷೆಯನ್ನು, ನಿಗಧಿತ ಇಲಾಖಾ ಪರೀಕ್ಷೆಯನ್ನು ಮತ್ತು ಕನ್ನಡ ಭಾಷಾ ಪರೀಕ್ಷೆಯಲ್ಲಿ ಕಡ್ಡಾಯವಾಗಿ ಉತ್ತೀರ್ಣರಾಗತಕ್ಕದ್ದು ಅಥವಾ ನಿಯಮಗಳ ಪ್ರಕಾರ ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಬೇಕಾಗುವುದರಿಂದ ವಿನಾಯಿತಿಯನ್ನು ಪಡೆಯತಕ್ಕದ್ದು ಎಂಬ ನಿಯಮಗಳಿರುತ್ತದೆ.

ಕವಿಮಂ ನೌಕರಿ ಭರ್ತಿ ಮತ್ತು ಬಡತಿ ನಿಯಮಾವಳಿಗೆ ದಿನಾಂಕ: 07.03.2003 ರ ಅಧಿಸೂಚನೆಯಲ್ಲಿ ಮಾಡಲಾಗಿರುವ ತಿದ್ದುಪಡಿಯಂತೆ, ಪರೀಕ್ಷಾರ್ಥ ಅವಧಿ ಮೇಲೆ ನೇಮಕಾತಿಗೊಳ್ಳುವ ನೌಕರರು ಪರೀಕ್ಷಾರ್ಥ ಅವಧಿಯೊಳಗೆ ನಿಗದಿತ ಪರೀಕ್ಷೆಗಳಲ್ಲಿ ಉತ್ತೀರ್ಣರಾಗದಿದ್ದಲ್ಲಿ, ಅಂತಹ ನೌಕರರನ್ನು ಸೇವೆಯಿಂದ ವಜಾಗೊಳಿಸಲು ಸಕ್ಷಮ/ನೇಮಕಾತಿ ಪ್ರಾಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳಬೇಕಿರುತ್ತದೆ. ಆದರೆ, ಕೆಲವೊಂದು ಪ್ರಕರಣಗಳಲ್ಲಿ, ನಿಗಧಿತ ಇಲಾಖಾ ಪರೀಕ್ಷೆಗಳನ್ನು ನೌಕರರು ತಮ್ಮ ಪರೀಕ್ಷಾರ್ಥ ಅವಧಿಯೊಳಗೆ ಉತ್ತೀರ್ಣರಾಗದೇ ಇದ್ದರೂ ಸಹ ಆಂತಹ ನೌಕರರ ವಿರುದ್ಧ ಸಂಬಂಧಪಟ್ಟ ಸಕ್ಷಮ/ನೇಮಕಾತಿ ಪ್ರಾಧಿಕಾರಿಗಳು ಯಾವುದೇ ಕ್ರಮ ಜರುಗಿಸದೇ ಇರುವುದು ಕಂಡುಬಂದಿರುತ್ತದೆ. ಅಲ್ಲದೇ, ಪರೀಕ್ಷಾರ್ಥ ಅವಧಿಯನ್ನು ತೃಪ್ತಿಕರವಾಗಿ ಪೂರ್ಣಗೊಳಿಸದೇ ಇರುವ ಕೆಲವೊಂದು ನೌಕರರನ್ನು ನೇಮಕಾತಿ/ಸಕ್ಷಮ ಪ್ರಾಧಿಕಾರಿಗಳು ಯಾವುದೇ ಕ್ರಮ ಕೈಗೊಳ್ಳದೇ ವಯೋನಿವೃತ್ತಿ ಹೊಂದುವವರೆಗೂ ಸೇವೆಯಲ್ಲಿ ಮುಂದುವರಿಸಿರುವುದು ನಿಗಮದ ಗಮನಕ್ಕೆ ಬಂದಿರುತ್ತದೆ.

ಪರೀಕ್ಷಾರ್ಥ ಅವಧಿಯನ್ನು ಪೂರ್ಣಗೊಳಿಸದೆ ನಿವೃತ್ತಿಗೊಂಡಿರುವ ಕೆಲವು ನೌಕರರು ತಮಗೆ ಪಿಂಚಣಿ ಸವಲತ್ತುಗಳನ್ನು ಇತ್ಯರ್ಥಪಡಿಸುವಂತೆ ಹಾಗೂ ಇತರೆ ಸೇವಾ ಸೌಲಭ್ಯಗಳನ್ನು ನೀಡುವಂತೆ ನ್ಯಾಯಾಲಯದ ಮೊರೆ ಹೋಗಿರುತ್ತಾರೆ. ಇಂತಹ ಪ್ರಕರಣಗಳಲ್ಲಿ ನೇಮಕಾತಿ/ಸಕ್ಷಮ ಪ್ರಾಧಿಕಾರಿಗಳ ಸಂಪೂರ್ಣ ಲೋಪದೋಷವಿರುವುದನ್ನು ನಿಗಮವು ಬಹಳ ಗಂಭೀರವಾಗಿ ಪರಿಗಣಿಸಿದೆ.

ಈ ಹಿನ್ನಲೆಯಲ್ಲಿ, ಈ ಕೆಳಕಂಡ ಅಂಶಗಳನ್ನು ಎಲ್ಲಾ ನೇಮಕಾತಿ/ಸಕ್ಷಮ ಪ್ರಾಧಿಕಾರಿಗಳು ಕಟ್ಟುನಿಟ್ಟಾಗಿ ಪಾಲಿಸಲು ಸೂಚಿಸಲಾಗಿದೆ:-

1. ಎಲ್ಲಾ ಸಕ್ಷಮ/ನೇಮಕಾತಿ ಪ್ರಾಧಿಕಾರಿಗಳು ತಕ್ಷಣವೇ ತಮ್ಮ ವ್ಯಾಪ್ತಿಯಲ್ಲಿನ ನೌಕರರ ಸೇವಾ ಪುಸ್ತಕಗಳನ್ನು ಪರಿಶೀಲಿಸಿ, ಪರೀಕ್ಷಾರ್ಥ ಅವಧಿಯ (Probationary Period) ಮೇಲೆ ನೇಮಕಗೊಂಡು, ಪರೀಕ್ಷಾರ್ಥ ಅವಧಿಯೊಳಗೆ ನಿಗಧಿತ ಕಡ್ಡಾಯ ಇಲಾಖಾ ಪರೀಕ್ಷೆಯಲ್ಲಿ ಉತ್ತೀರ್ಣರಾಗದ ನೌಕರರ ಪಟ್ಟಿಯನ್ನು ತಯಾರಿಸಿಕೊಳ್ಳುವುದು.

2. ನಿಗಮದ ನೌಕರರು ಪರೀಕ್ಷಾರ್ಥ ಅವಧಿಯೊಳಗೆ ನಿಗಧಿತ ವೃತ್ತಿ ಪೂರ್ವ ತರಬೇತಿ ಅಂತ್ಯದಲ್ಲಿ ನಡೆಸಲಾಗುವ ಪರೀಕ್ಷೆ ಅಥವಾ ಇತರ ಕಡ್ಡಾಯ ಇಲಾಖಾ ಪರೀಕ್ಷೆಯಲ್ಲಿ ಉತ್ತೀರ್ಣರಾಗದಿದ್ದಲ್ಲಿ, ಸದರಿ ನೌಕರರಿಗೆ ಅಂತಿಮವಾಗಿ ಅಂತಹ ಪರೀಕ್ಷೆಯಲ್ಲಿ ಹಾಜರಾಗಲು 'ಒಂದು ಬಾರಿಗೆ ಮಾತ್ರ' ಕೊನೆಯ ಅವಕಾಶವನ್ನು ನೀಡುವುದು. ಆದಾಗ್ಯೂ, ಸದರಿ ಪರೀಕ್ಷೆಯಲ್ಲಿ ಉತ್ತೀರ್ಣರಾಗದ ನೌಕರರ ವಿರುದ್ಧ ಕವಿಮಂ ನೌಕರಿ ಭರ್ತಿ ಮತ್ತು ಬಡತಿ ನಿಯಮಾವಳಿಗಳ ನಿಬಂಧನೆ-6 ರ ಅನ್ವಯ ಸೇವೆಯಿಂದ ವಜಾಗೊಳಿಸಲು ಸಕ್ಷಮ/ನೇಮಕಾತಿ ಪ್ರಾಧಿಕಾರಿಗಳು ಕೂಡಲೇ ಅಗತ್ಯ ಕ್ರಮ ಕೈಗೊಳ್ಳುವುದು.

3. ಪರೀಕ್ಷಾರ್ಥ ಅವಧಿಯ ಮೇಲೆ ನೇಮಕಗೊಂಡು ವೃತ್ತಿ ಪೂರ್ವ ತರಬೇತಿ ಅಂತ್ಯದಲ್ಲಿ ನಡೆಸಲಾಗುವ ಪರೀಕ್ಷೆ ಅಥವಾ ಇತರ ಕಡ್ಡಾಯ ಇಲಾಖಾ ಪರೀಕ್ಷೆಯಲ್ಲಿ ಉತ್ತೀರ್ಣರಾಗದ ನೌಕರರ ವಿರುದ್ಧ ಮೇಲೆ ತಿಳಿಸಿರುವಂತೆ ಕೂಡಲೇ ಕ್ರಮ ಕೈಗೊಳ್ಳದ ಸಕ್ಷಮ/ನೇಮಕಾತಿ ಪ್ರಾಧಿಕಾರ ಹಾಗೂ ಸಂಬಂಧಪಟ್ಟ ಎಲ್ಲಾ ಅಧಿಕಾರಿ/ನೌಕರರನ್ನು, ಪ್ರಕರಣಕ್ಕೆ ನೇರ ಹೊಣೆಗಾರರನ್ನಾಗಿ ಮಾಡಲಾಗುವುದು ಮತ್ತು ಸದರಿಯವರ ವಿರುದ್ಧ ನಿಯಮಾನುಸಾರ ಶಿಸ್ತುಕ್ರಮ ಜರುಗಿಸಲಾಗುವುದು.

ಮೇಲೆ ತಿಳಿಸಿರುವ ನಿರ್ದೇಶನವನ್ನು ಇನ್ನು ಮುಂದೆ ನಿಗಮದಲ್ಲಿ ಕಟ್ಟುನಿಟ್ಟಾಗಿ ಪಾಲಿಸುವಂತೆ ತಿಳಿಸಲಾಗಿದೆ. ಈ ನಿರ್ದೇಶನವನ್ನು ಪಾಲಿಸದ ಸಕ್ಷಮ/ನೇಮಕಾತಿ ಪ್ರಾಧಿಕಾರಿಗಳ ಮೇಲೆ ಶಿಸ್ತು ಕ್ರಮ ಕೈಗೊಳ್ಳಲಾಗುವುದು.

3/6/21

ನಿರ್ದೇಶಕರು
(ಆಡಳಿತ ಮತ್ತು ಮಾನವ ಸಂಪನ್ಮೂಲ)

**ಮೆಮೋ**

**ಕ್ರಮಾಂಕ:ಪ್ರವ್ಯ(ಆ ಮತ್ತು ಮಾ.ಸಂ)/ಉಪ್ರವ್ಯ/ಸಪ್ರವ್ಯ/ವ್ಯ/ಹಿಸ-2/21-22/** CYS-627 **ದಿನಾಂಕ:** 03 AUG 2021

ಪ್ರೊಬೇಷನರಿ ಅವಧಿಯಲ್ಲಿ ನಿಗಧಿಪಡಿಸಿರುವ ಇಲಾಖಾ ಪರೀಕ್ಷೆಗಳನ್ನು ಉತ್ತೀರ್ಣರಾಗದೇ ಇರುವಂತಹ ನೌಕರರ ಸೇವೆಯನ್ನು ವಜಾಗೊಳಿಸುವ ಬಗ್ಗೆ ಕವಿಪ್ರನಿನಿ(ಆ ಮತ್ತು ಮಾಸಂ), ಕವಿಪ್ರನಿನಿ,ಬೆಂಗಳೂರುರವರು ಹೊರಡಿಸಿರುವ ಸುತ್ತೋಲೆ ಸಂಖ್ಯೆ:ಕವಿಪ್ರನಿನಿ/ಬಿ16/820/2019-20 ದಿನಾಂಕ:03.06.2021ರ ಆದೇಶವನ್ನು ಚಾವಿಸನಿನಿಯಲ್ಲಿ ಯಥಾವತ್ತಾಗಿ ಅಳವಡಿಸಿಕೊಳ್ಳಲು ಆದೇಶಿಸಲಾಗಿದೆ.

ಪ್ರಧಾನ ವ್ಯವಸ್ಥಾಪಕರು(ಆ ಮತ್ತು ಮಾ.ಸಂ)
ಚಾ.ವಿ.ಸ.ನಿ.ನಿ., ಮೈಸೂರು.

**ಪ್ರತಿಗಳು:**

- ಮುಖ್ಯ ಆರ್ಥಿಕ ಅಧಿಕಾರಿ, ಚಾವಿಸನಿನಿ, ಮೈಸೂರುರವರ ಅವಗಾಹನೆಗಾಗಿ.
- ಮುಖ್ಯ ಪ್ರಧಾನ ವ್ಯವಸ್ಥಾಪಕರು(ಆಂ.ಪ), ನಿಗಮ ಕಛೇರಿ, ಮೈಸೂರು.
- ಮುಖ್ಯ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನಾ ವಲಯ, ಚಾವಿಸನಿನಿ, ಮೈಸೂರು/ಹಾಸನ.
- ಎಲ್ಲಾ ಅಧೀಕ್ಷಕ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನಾ ವೃತ್ತ, ಚಾವಿಸನಿನಿ.
- ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್(ವಿ)/ಲೆಕ್ಕಾಧಿಕಾರಿ, ಕಾರ್ಯ ಮತ್ತು ಪಾಲನಾ ವಿಭಾಗ, ಚಾವಿಸನಿನಿ ರವರ ಮಾಹಿತಿಗಾಗಿ ಹಾಗು ಅಗತ್ಯ ಕ್ರಮಕ್ಕಾಗಿ.
- ಉಪ ಪ್ರಧಾನ ವ್ಯವಸ್ಥಾಪಕರು(ಎಂ.ಐ.ಎಸ್), ನಿಗಮ ಕಛೇರಿ, ಮೈಸೂರುರವರಿಗೆ ನಿಗಮದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
- ಆ.ಕಾ-ವ್ಯ.ನಿ/ನಿ(ತಾಂ)/ಮು.ಆ.ಅ
- ಸ-2(ಆ ಮತ್ತು ಮಾ.ಸಂ)/ಪ್ರ.ಕ.